ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 12/1/21

# ಸಂಪುಟ ವಿಸ್ತರಣೆ ಖಚಿತ

**ಸಂ.ಕ. ಸಮಾಚಾರ ಮೈಸೂರು**

ಇದೇ ಜನವರಿ 13 ಅಥವಾ 14 ರಂದು ರಾಜ್ಯ ಸಚಿವ ಸಂಪುಟ ವಿಸ್ತರಣೆಯಾಗುವುದು ಖಚಿತ. ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.



ಸುತ್ತೂರಿನಲ್ಲಿ ಸುದ್ದಿಗಾರರೊಡನೆ ಮಾತನಾಡಿ, 13ರ ಮಧ್ಯಾಹ್ನ ನಂತರ ಅಮಾವಾಸ್ಯೆ ಕಳೆಯುವುದರಿಂದ ಅಂದೇ ಸಂಪುಟ ವಿಸ್ತರಣೆಯಾಗಲಿದೆಯೋ ಅಥವಾ ಪುನರ್ ರಚನೆಯಾಗಲಿದೆಯೋ ಎಂದು ಎಲ್ಲರಿಗೂ ತಿಳಿಯಲಿದೆ, ವರಿಷ್ಠರನ್ನು ಕೇಳಿಕೊಂಡು ಸಮಯ ನಿಗಧಿ ಮಾಡಿ ನಿಮಗೂ ತಿಳಿಸುತ್ತೇನೆ ಎಂದು ಹೇಳಿದರು.

**ಮಾರ್ಚ್‌ನಲ್ಲಿ ಬಜೆಟ್:** ಬಳಿಕ, ಕೊವಿಡ್–19 ನಂತರ ರಾಜ್ಯದಲ್ಲಿ ಆರ್ಥಿಕ ಪರಿಸ್ಥಿತಿ ಉತ್ತಮವಾಗಿಲ್ಲ. ಈ ಹಿನ್ನೆಲೆಯಲ್ಲಿ ಜನಪರ, ಅಭಿವೃದ್ಧಿ ಪರ ಬಜೆಟ್ ನೀಡಲಾಗುವುದು. ಮಾರ್ಚ್ ವೇಳೆಗೆ ತಯಾರಿ ಪೂರ್ಣಗೊಳ್ಳಲಿದೆ. ಮಾರ್ಚ್ ಮೊದಲ ವಾರವೇ ಬಜೆಟ್ ಅಧಿವೇಶನ ಕರೆಯಲಿದ್ದು ಉತ್ತಮ ಬಜೆಟ್ ಮಂಡಿಸುವ ವಿಶ್ವಾಸವಿದೆ ಎಂದು ತಿಳಿಸಿದರು.

# ಸಚಿವ ಸ್ಥಾನ ತ್ಯಾಗಕ್ಕೆ ಸಿದ್ಧ

**ಹೊಸಪೇಟೆ:** ಸಚಿವಾಕಾಂಕ್ಷಿಗಳ ಸಂಖ್ಯೆ ಹೆಚ್ಚು ಇದ್ದರೆ ಸಚಿವ ಸ್ಥಾನ ತ್ಯಾಗಕ್ಕೆ ನಾನು ಸಿದ್ಧ. ಈ ಹಿಂದೆ ಹೇಳಿದಂತೆ ನಾನು ಈಗಲೂ ಆ ಮಾತಿಗೆ ಬದ್ಧನಾಗಿದ್ದೇನೆ ಎಂದು ಅರಣ್ಯ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆನಂದಸಿಂಗ್ ಹೇಳಿದರು.



ಸೋಮವಾರ ನಗರದ ಪಟೇಲ ನಗರದ ಬಿಜೆಪಿ ಪಕ್ಷದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ಬಿಜೆಪಿ ಸರ್ಕಾರ ಬರುವುದಕ್ಕೆ ಕಾರಣರಾದ ಶಾಸಕರಿಗೆ ಸಚಿವ ಸ್ಥಾನ ಸಿಗಬಹುದು. ಅವರಿಗೆ ಈಗಾಗಲೇ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಮಾತು ಕೊಟ್ಟಿದ್ದು ಅದರಂತೆ ನಡೆದು ಕೊಳ್ಳುತ್ತಾರೆ. ಸಿಎಂ ಕೊಟ್ಟ ಮಾತಿಗೆ ತಪ್ಪುವುದಿಲ್ಲ, ಕೊಟ್ಟ ಮಾತಿನಂತೆ ನಡೆದುಕೊಂಡಿದ್ದಾರೆ. ಇದಕ್ಕೆ ನನಗೆ ಕೊಟ್ಟ ಮಾತಿನಂತೆ ಹೊಸಪೇಟೆಯನ್ನು ವಿಜಯನಗರ ನೂತನ ಜಿಲ್ಲೆ ಮಾಡಿರುವುದೇ ಉದಾಹರಣೆ ಎಂದರು.

ಸಂಪುಟ ರಚನೆ ಮಾಡುತ್ತಾರೊ ಅಥವಾ ವಿಸ್ತರಣೆ ಮಾಡುತ್ತಾರೊ ಎಂಬುದು ನನಗೆ ತಿಳಿದಿಲ್ಲ ಎಂದು ಸ್ಪಷ್ಟಪಡಿಸಿದರು.